2. ಉಡುಪಿ ಮತ್ತು ಮಂಗಳೂರು ಜಿಲ್ಲೆಯಲ್ಲಿ ರೇಷ್ಮೆ ಮಾರುಕಟ್ಟೆಗೆ ಮಾಡಲಾದ ವ್ಯವಸ್ಥೆಯಾವುದು?

ಶ್ರೀ ಎಂ. ಮಹಾದೇವ್ (ರೇಷ್ಮೆ ಮತ್ತು ಜವಳಿ ಸಚಿವರು) :

1. ಉಡುಪಿ ಜಿಲ್ಲೆಯಲ್ಲಿ ಹಾಲಿ 145.00 ಹೆಕ್ಟೇರ್ ವಿಸೀರ್ಣದಲ್ಲಿ ಹಿಪ್ಪುನೇರಳೆ ಬೆಳೆಯಲಾಗುತ್ತಿದೆ.

2. ಮಂಗಳೂರು ಮತ್ತು ಉಡುಪಿ ಜಿಲ್ಲೆಯ ರೇಷ್ಮೆ ಬೆಳಗಾರರು ಬೆಳೆದ ಗೂಡನ್ನು ಮಾರಾಟ ಮಾಡಲು ಬಿ.ಸಿ. ರೋಡಿನಲ್ಲಿ ಸರ್ಕಾರಿ ಗೂಡಿನ ಮಾರುಕಟ್ಟೆ ಸ್ಥಾಪಿಸಲಾಗಿದೆ.

ಹುಬ್ಬಳ್ಳಿ - ಧಾರವಾಡದಲ್ಲಿ ಹೊಸ ಪೈಪುಗಳ ಅಳವಡಿಕೆ

4747 - ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್ ಖಾನ್ (ಹುಬ್ಬಳ್ಳಿ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ - ಧಾರವಾಡ ಮಹಾನಾಗರ ಪಾಲಿಕೆಯ ವ್ಯಾಪ್ತಿಯಲ್ಲಿ ನೀರಿನ ಪೈಪುಗಳು ಹಾಗೂ ಒಳಚರಂಡಿ ಪೈಪುಗಳು ಹಳೆದಾಗಿ ಕೆಟ್ಟು ಹೋಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಪೈಪುಗಳು ಹೊಸದಾಗಿ ಜೋಡಿಸುವ ಸಮಗ್ರವಾದ ಯೋಜನೆ ರೂಪಿಸಲಾಗಿದೆಯೇ? ಇದಕ್ಕಾಗಿ ತಗಲುವ ಅಂದಾಜು ವೆಚ್ಚ ಎಷ್ಟು?

ಇ) ಈ ಯೋಜನೆಗೆ ಯಾವ ವರ್ಷದಿಂದ ಮಂಜೂರಾತಿ ನೀಡಲಾಗುವುದು? ಇಲ್ಲವಾದಲ್ಲಿ ಕಾರಣವೇನು?

ಶ್ರೀ ಬಿ.ಬಿ. ಚಿಮ್ಮನಕಟ್ಟಿ (ನಗರಾಭಿವೃದ್ಧಿ ಸಚಿವರು) :

ಅ) ಹೌದು.

ಆ) ಸರ್ಕಾರದ ಹಂತದಲ್ಲಿ ಇಂತಹ ಪ್ರಸ್ತಾವನೆ ಇರುವುದಿಲ್ಲ.

ಇ) ಮಹಾನಗರ ಪಾಲಿಕೆಯ ಆರ್ಥಿಕ ಪರಿಸ್ಥಿತಿಯು ಸುಧಾರಿಸಿದ ನಂತರ ಕ್ರಮ ಕೈಗೊಳ್ಳಲಾಗುವುದು.

ಹುಬ್ಬಳ್ಳಿ ಧಾರವಾಡದಲ್ಲಿ ರಸ್ತೆ ರಿಪೇರಿ ಬಗ್ಗೆ

4748 - ಶ್ರೀ ಹೊನ್ನಳ್ಳಿ ಜಬ್ಬಾರ್‌ಖಾನ್ ಹೈಯತ್‌ಖಾನ್ (ಹುಬ್ಬಳ್ಳಿ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ- ಧಾರವಾಡ ಮಹಾನಾಗರ ಪಾಲಿಕೆ ವ್ಯಾಪ್ತಿಯಲ್ಲಿ ಅತಿವೃಷ್ಟಿಯಿಂದ ಎಲ್ಲಾ ರಸ್ತೆಗಳು ಕೆಟ್ಟಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ?